**Akashvani : Bangalore**
**Regional Bulletin In Kannada**
**14.06.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**14.06.2024 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ಕಲ್ಯಾಣಕರ್ನಾಟಕ ಜಿಲ್ಲೆಗಳಲ್ಲಿ ಮೂಲಸೌಕರ್ಯಾಭಿವೃದ್ಧಿ ಆದ್ಯತೆಗೆ ಮುಖ್ಯಮಂತ್ರಿ ಸೂಚನೆ**

**೨. ಬೆಂಗಳೂರು ಹಸಿರೀಕರಣಕ್ಕೆ ಶಾಲಾ ಮಕ್ಕಳಿಗಾಗಿ 'ಹಸಿರು ರಕ್ಷಕ' ಅಭಿಯಾನ**

**೩. ವಿಶ್ವ ಯೋಗದಿನಾಚರಣೆಗೆ ಮೈಸೂರು ಅರಮನೆ ಆವರಣದಲ್ಲಿ ಸಿದ್ಧತೆ ಪ್ರಗತಿಯಲ್ಲಿ**

**೪. ಕೊಡಗು ಜಿಲ್ಲೆಯಲ್ಲಿ ಸಂಭವನೀಯ ಮುಂಗಾರು ಅವಘಡ ಮಾಹಿತಿಗೆ ವಿಪತ್ತು ನಿರ್ವಹಣಾ ಕೇಂದ್ರಗಳ ಆರಂಭ**

**<><*<><>*><>**

ಕಲ್ಯಾಣ ಕರ್ನಾಟಕ ಪ್ರದೇಶ ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಅತ್ಯಂತ ಹಿಂದುಳಿದಿದ್ದು, ಈ ಜಿಲ್ಲೆಗಳ ಸುಧಾರಣೆಗೆ ಆದ್ಯತೆ ಅಗತ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ. ಬೆಂಗಳೂರಿನಲ್ಲಿಂದು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಪ್ರಗತಿ ಪರಿಶೀಲನೆ ಸಭೆಯಲ್ಲಿ ಅವರು ಮಾತನಾಡಿದರು. ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ ಅಭಿವೃದ್ಧಿಯಲ್ಲಿ ಹಿನ್ನಡೆಯಾಗಿರುವ ಕ್ಷೇತ್ರಗಳಿಗೆ ಹೆಚ್ಚು ಗಮನಹರಿಸಬೇಕು. ಹಾಸ್ಟಲ್‌ಗಳು, ಅಂಗನವಾಡಿ ಹಾಗೂ ವಸತಿ ಶಾಲೆಗಳ ಮೂಲಸೌಕರ್ಯಾಭಿವೃದ್ಧಿಗೆ ಒತ್ತು ನೀಡಬೇಕು ಎಂದು ಅವರು ಹೇಳಿದರು. ಲಭ್ಯ ಅನುದಾನವನ್ನು ಆದ್ಯತೆ ಮೇರೆಗೆ ಬಳಸಿಕೊಂಡು ರಸ್ತೆ, ಕುಡಿಯುವ ನೀರು, ನೀರಾವರಿ ಮೊದಲಾದ ಮೂಲಸೌಕರ್ಯಗಳಿಗೆ ಬಳಸಬೇಕು. ಪ್ರೌಢಶಾಲೆ, ಪದವಿಪೂರ್ವ ಮತ್ತು ಪದವಿ ಕಾಲೇಜುಗಳ ಸ್ಥಾಪನೆಗೆ ಆಡಳಿತ ಇಲಾಖೆಗಳು ಮಂಜೂರಾತಿ ನೀಡಬೇಕು. ಸಿಎಸ್‌ಆರ್ ಅಡಿ ಕಲ್ಯಾಣ ಕರ್ನಾಟಕದ ಭಾಗದ ಶಾಲೆಗಳ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಬೇಕು ಎಂದು ಹೇಳಿದರು. ಗುಲಬರ್ಗ ವಿಶ್ವವಿದ್ಯಾಲಯದಲ್ಲಿ ಬೋಧಕ ಸಿಬ್ಬಂದಿ ಕೊರತೆ ನಿವಾರಿಸಲು ಹುದ್ದೆಗಳ ಭರ್ತಿಗೆ ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ದೇಶಿಸಿದರು.

**<><*<><>*><>**

ಕಲ್ಯಾಣ ಕರ್ನಾಟಕ ಪ್ರದೇಶದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಬೇಕಾಗಿದೆ ಎಂದು ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ನಡೆದ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕದ ವಲಯದ ಯುವ ಜನರು ಖಾಸಗೀ ವಲಯದಲ್ಲಿ ಉದ್ಯೋಗಗಳಿಗೆ ಅರ್ಹರಾಗುವಂತೆ ಮಾಡಬೇಕಿದೆ. ಕಲ್ಯಾಣ ಕರ್ನಾಟಕ ಪ್ರದೇಶದ ಒಂದು ಜಿಲ್ಲಾ ಕೇಂದ್ರದಲ್ಲಿ ಬೃಹತ್ ಕೌಶಲ್ಯಾಭಿವೃದ್ಧಿ ಕೇಂದ್ರ ಸ್ಥಾಪಿಸಬೇಕು ಎಂದು ಮನವಿ ಮಾಡಿದರು. ಕಲ್ಯಾಣ ಕರ್ನಾಟಕಕ್ಕೆ ೩೭೧-ಜೆ ಸಾಂವಿಧಾನಿಕ ತಿದ್ದುಪಡಿ ಅಡಿಯಲ್ಲಿ ವಿಶೇಷ ಸ್ಥಾನಮಾನವಿದ್ದರೂ ಸಹ ಖಾಲಿ ಇರುವ ಹುದ್ದೆಗಳ ನೇಮಕಾತಿಯಲ್ಲಿ ಇಲಾಖೆಗಳ ಪೂರ್ವಾನುಮೋದನೆಗಾಗಿ ವಿಳಂಬವಾಗುತ್ತಿದೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಬೇಕು ಎಂದು ಅವರು ಮನವಿ ಮಾಡಿದರು. ಬೀದರ್ ವಿಮಾನ ನಿಲ್ದಾಣವನ್ನು ೬ ತಿಂಗಳಿಂದ ಮುಚ್ಚಲಾಗಿದೆ. ಉಡಾನ್ ಯೋಜನೆಯಡಿ ಸಬ್ಸಿಡಿ ದೊರೆಯದಿರುವುದೇ ಇದಕ್ಕೆ ಕಾರಣ. ಬೀದರ್ ವಿಮಾನ ನಿಲ್ದಾಣದ ಪುನರ್ ಆರಂಭಕ್ಕೆ ಕ್ರಮಕೈಗೊಳ್ಳಬೇಕು ಎಂದು ಈಶ್ವರ್ ಖಂಡ್ರೆ ಮನವಿ ಮಾಡಿದರು.

**<><*<><>*><>**

ಬೆಂಗಳೂರಿನ ಶಾಲಾ-ಕಾಲೇಜು ವಿದ್ಯಾರ್ಥಿಗಳಲ್ಲಿ ಪರಿಸರ ರಕ್ಷಣೆಯ ಹೊಣೆಗಾರಿಕೆಯನ್ನು ಮೂಡಿಸುವ ಉದ್ದೇಶದಿಂದ ಗಿಡಗಳನ್ನು ನೆಟ್ಟು ಪೋಷಿಸಲು, 'ಹಸಿರು ರಕ್ಷಕ' ಅಭಿಯಾನವನ್ನು ರೂಪಿಸಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ವಿಶ್ವಪರಿಸರ ದಿನಾಚರಣೆಯ ಅಂಗವಾಗಿ ಏರ್ಪಡಿಸಿದ್ದ ಬ್ರ್ಯಾಂಡ್ ಬೆಂಗಳೂರು ಹಸಿರೀಕರಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಳೆದ ವರ್ಷ ೫೨ ಸಾವಿರ ಗಿಡಗಳನ್ನು ಶಾಲಾ ಮಕ್ಕಳೇ ನೆಟ್ಟು ಬೆಳೆಸಿದ್ದಾರೆ. ಗಿಡ ನೆಟ್ಟರೆ ಮರ, ಮರದಿಂದ ಮಳೆ, ಮಳೆ ಬಂದರೆ ನೀರು, ನೀರು ಇದ್ದರೆ ನಾವು ನೀವು ಎಂದು ಶಾಲಾ ಮಕ್ಕಳಿಗೆ ಕಿವಿ ಮಾತು ಹೇಳಿದರು. ಬೆಂಗಳೂರು ನಗರ ಅಂದಾಜಿಗೂ ಮೀರಿ ಬೆಳೆಯುತ್ತಿದ್ದು, ಆರೋಗ್ಯ, ಶಿಕ್ಷಣ, ಕೈಗಾರಿಕೆ, ಉದ್ಯಮ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ದಾಪುಗಾಲಿಡುತ್ತಿದೆ. ಒಂದು ಕಾಲದಲ್ಲಿ ಹಸಿರುನಗರ ಎಂದು ಹೆಸರುವಾಸಿಯಾಗಿದ್ದ ಬೆಂಗಳೂರಿನ ಹೆಮ್ಮೆಯನ್ನು ಕಾಪಾಡುವ ಜವಾಬ್ದಾರಿ ನಮ್ಮ ಮೇಲಿದ್ದು, ಇದಕ್ಕಾಗಿಯೇ ಈ ಅಭಿಯಾನವನ್ನು ರೂಪಿಸಲಾಗಿದೆ ಎಂದರು. ಬೆಂಗಳೂರಿನ ಹಸಿರು ಸಂರಕ್ಷಣೆಗೆ ಒಟ್ಟು ೪೧೦ ಕೋಟಿ ರೂಪಾಯಿ ಹಣ ಮೀಸಲಿಡಲಾಗಿದೆ. ಕಳೆದ ವರ್ಷ ೨೦೦ ಕ್ಕೂ ಹೆಚ್ಚು ತಾಲೂಕುಗಳು ಬರಗಾಲ ಎದುರಿಸಬೇಕಾಯಿತು. ಬೆಂಗಳೂರಿನಲ್ಲಿ ಹಿಂದೆಂದೂ ಕಾಣದಂತಹ ನೀರಿನ ಕೊರತೆ ಎದುರಾಯಿತು. ಅಂತಹ ಪರಿಸ್ಥಿತಿ ಮರುಕಳಿಸದಂತೆ ಎಚ್ಚರ ಅಗತ್ಯ ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

**<><*<><>*><>**

ಮಾನವ ಜೀವನದ ಸುಧಾರಣೆ ಮತ್ತು ಪರಿಪೂರ್ಣತೆಯಲ್ಲಿ ಶಿಕ್ಷಣದ ಪಾತ್ರ ಮಹತ್ವದ್ದು ಎಂದು ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ೧೧ನೇ ಘಟಿಕೋತ್ಸವದಲ್ಲಿ ಮಾತನಾಡಿದ ಅವರು, ಸಂಸ್ಕೃತ ಭಾಷೆ, ಭಾರತೀಯ ಸಾಂಪ್ರದಾಯಿಕ ಜ್ಞಾನದ ಭಾಷೆಯಾಗಿದೆ. ಹಲವು ಭಾಷೆಗಳ ತಾಯಿ ಎನ್ನುವ ಗೌರವಕ್ಕೆ ಪಾತ್ರವಾಗಿದೆ ಎಂದರು. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಂಸ್ಕೃತ ಸಂಶೋಧನೆಯ ಗುಣಮಟ್ಟವನ್ನು ಹೆಚ್ಚಿಸುವುದು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಯಲದ ಪ್ರಮುಖ ಉದ್ದೇಶಗಳಲ್ಲಿ ಒಂದಾಗಿದೆ ಎಂದು ಥಾವರ್‌ಚಂದ್ ಗೆಹ್ಲೋಟ್ ತಿಳಿಸಿದರು.

**<><*<><>*><>**

ಬೆಳಗಾವಿ ಜಿಲ್ಲೆಯಲ್ಲಿ ಕೇಂದ್ರ ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ಹಂತಹಂತವಾಗಿ ಅನುಷ್ಠಾನಗೊಳಿಸಲಾಗುವುದು ಎಂದು ಸಂಸದ ಜಗದೀಶ್ ಶೆಟ್ಟರ್ ಹೇಳಿದ್ದಾರೆ. ಬೆಳಗಾವಿಯಲ್ಲಿಂದು ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಬೆಳಗಾವಿ ಹೊರವಲಯದ ರಿಂಗ್ ರಸ್ತೆ, ಕಿತ್ತೂರು ಮಾರ್ಗದ ಬೆಳಗಾವಿ-ಧಾರವಾಡ ರೈಲ್ವೆ ಮಾರ್ಗ ನಿರ್ಮಾಣ, ವಿಮಾನ ನಿಲ್ದಾಣ ಅಭಿವೃದ್ಧಿ, ಸ್ಮಾರ್ಟ್ ಸಿಟಿ ಯೋಜನೆಯ ಕಾಮಗಾರಿಗಳಿಗೆ ಆದ್ಯತೆ ನೀಡುವುದಾಗಿ ಹೇಳಿದರು. ಹೆದ್ದಾರಿ ಮತ್ತು ರೈಲ್ವೆ ಮಾರ್ಗ ನಿರ್ಮಾಣ ಕಾಮಗಾರಿ ಆರಂಭಕ್ಕೆ ಮೊದಲು ರೈತರ ಮನ ಒಲಿಸಿ ಭೂಸ್ವಾಧೀನ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು. ಕಿತ್ತೂರು ಮಾರ್ಗದ ರೈಲ್ವೆ ಮಾರ್ಗ ನಿರ್ಮಾಣಕ್ಕೆ ಅಗತ್ಯ ಭೂಸ್ವಾಧೀನಕ್ಕೆ ನ್ಯಾಯಾಲಯದ ಅನುಮತಿ ದೊರೆತಿದ್ದರೂ ಸಹ ಕಾಮಗಾರಿ ನನೆಗುದಿಗೆ ಬಿದ್ದಿದೆ. ಈ ಬಗ್ಗೆ ತುರ್ತು ಗಮನಹರಿಸಲಾಗುವುದು ಎಂದು ಜಗದೀಶ್ ಶೆಟ್ಟರ್ ತಿಳಿಸಿದ್ದಾರೆ.

**<><*<><>*><>**

ನೂತನ ಅಪರಾಧ ಕಾನೂನುಗಳು ನ್ಯಾಯಾಂಗ ವ್ಯವಸ್ಥೆಯಲ್ಲಿ ಕ್ರಾಂತಿಕಾರಕ ಬದಲಾವಣೆ ತರಲಿದ್ದು, ಪ್ರಕರಣಗಳ ತ್ವರಿತ ವಿಲೇವಾರಿಗೆ ನೆರವಾಗಲಿವೆ ಎಂದು ಕರ್ನಾಟಕ ಹೈಕೋರ್ಟ್ ಹಿರಿಯ ವಕೀಲ ವಿನಾಯಕ.ವಿ.ಎಸ್ ಹೇಳಿದ್ದಾರೆ. ಆಕಾಶವಾಣಿಗೆ ನೀಡಿರುವ ವಿಶೇಷ ಸಂದರ್ಶನದಲ್ಲಿ ಅವರು, ಭಾರತೀಯ ನ್ಯಾಯ ಸಂಹಿತೆ ಸೇರಿದಂತೆ ಮೂರು ನೂತನ ಅಪರಾಧ ಕಾನೂನುಗಳು ಜುಲೈ ೧ ರಿಂದ ಜಾರಿಗೊಳ್ಳಲಿದ್ದು, ನ್ಯಾಯಾಂಗ ವ್ಯವಸ್ಥೆಯಲ್ಲಿ ಸುಧಾರಣೆ ತರಲಿವೆ ಎಂದರು.

**ಧ್ವನಿ: ವಿನಾಯಕ.ವಿ.ಎಸ್. ಹಿರಿಯ ವಕೀಲರು**

**<><*<><>*><>**

ಈ ತಿಂಗಳ ೨೧ ರಂದು ಮೈಸೂರು ಅರಮನೆ ಆವರಣದಲ್ಲಿ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಮೈಸೂರು-ಕೊಡಗು ಸಂಸದ ಯದುವೀರ ಒಡೆಯರ್ ತಿಳಿಸಿದ್ದಾರೆ. ಇಂದು ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಯೋಗ ದಿನಾಚರಣೆಗಾಗಿ ಸರ್ಕಾರ ನೀಡಿರುವ ಅನುದಾನದೊಂದಿಗೆ ದಾನಿಗಳಿಂದ ಪಡೆದ ದೇಣಿಗೆ ಹಣವನ್ನು ಬಳಸಲಾಗುವುದು ಎಂದರು. ಜಿಲ್ಲಾಧಿಕಾರಿ ಕೆ.ವಿ.ರಾಜೇಂದ್ರ ಮಾತನಾಡಿ, ಅರಮನೆ ಅಂಗಳದಲ್ಲಿ ಯೋಗ ದಿನಾಚರಣೆ ನಡೆಯಲಿದೆ. ಹತ್ತು ಸಾವಿರಕ್ಕೂ ಹೆಚ್ಚು ಯೋಗಪಟುಗಳು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಅಂದು  ಬೆಳಗ್ಗೆ ೬.೩೦ ರಿಂದ ಕಾರ್ಯಕ್ರಮ ಪ್ರಾರಂಭವಾಗಲಿದ್ದು, ಎಲ್ಲ ಅಗತ್ಯ ವ್ಯವಸ್ಥೆಗಳನ್ನು ಸಜ್ಜಗೊಳಿಸಲಾಗುತ್ತಿದೆ ಎಂದರು.

**<><*<><>*><>**

ಕೊಡಗು ಜಿಲ್ಲೆಯಲ್ಲಿ ಮುಂಗಾರು ನಿದಾನವಾಗಿ ಚೇತರಿಕೆ ಕಾಣುತ್ತಿದೆ. ಜೂನ್ ಮೊದಲ ವಾರದಿಂದಲೇ ಬಿರುಸು ಪಡೆಯಬೇಕಾಗಿದ್ದ ಮುಂಗಾರು ಮಳೆ, ಜೂನ್ ಎರಡನೇ ವಾರವಾದರೂ ಜೋರಾಗಿಲ್ಲ. ಈ ನಡುವೆ ಮಳೆಗಾಲದಲ್ಲಿ ಪ್ರಾಕೃತಿಕ ವಿಕೋಪ ಸಂಬಂಧಿಸಿದ ಪ್ರಕರಣಗಳು ವರದಿಯಾದಲ್ಲಿ ಮಾಹಿತಿ ನೀಡಲು ವಿಪತ್ತು ನಿರ್ವಹಣಾ ಕೇಂದ್ರಗಳನ್ನು ತೆರಯಲಾಗಿದೆ ಎಂದು ಜಿಲ್ಲಾಧಿಕಾರಿ ವೆಂಕಟ್‌ರಾಜ ತಿಳಿಸಿದ್ದಾರೆ. ಮಳೆಗಾಲದಲ್ಲಿ ಕಂಡುಬರುವ ಭೂಕುಸಿತ ಮೊದಲಾದ ನೈಸರ್ಗಿಕ ಪ್ರಕರಣಗಳು ಉಂಟಾದಲ್ಲಿ ಸಾರ್ವಜನಿಕರು ಈ ಕೇಂದ್ರಗಳನ್ನು ಸಂಪರ್ಕಿಸಬೇಕು ಎಂದು ಸೂಚಿಸಲಾಗಿದೆ. ಕೊಡಗು ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ ೦೮೨೭೨-೨೨೧೦೭೭ ಅಥವಾ ವಾಟ್ಸಅಪ್ ಸಂಖ್ಯೆ ೮೫೫೫೦-೦೦-೧೦೭೭ ಗೆ ಸಂಪರ್ಕಿಸಿ ಮಾಹಿತಿ ನೀಡಬೇಕು ಎಂದು ಮನವಿ ಮಾಡಲಾಗಿದೆ. ದೂರವಾಣಿ ಸಂಖ್ಯೆ ಮತ್ತೊಮ್ಮೆ, ೦೮೨೭೨-೨೨೧೦೭೭ ಅಥವಾ ವಾಟ್ಸಅಪ್ ಸಂಖ್ಯೆ ೮೫೫೫೦-೦೦-೧೦೭೭ ಗೆ ಸಂಪರ್ಕಿಸಿ ಮಾಹಿತಿ ನೀಡಬೇಕು ಎಂದು ಮನವಿ ಮಾಡಲಾಗಿದೆ.

**<><*<><>*><>**

ಕಾವೇರಿ ಐದನೇ ಹಂತದ ಕಾಮಗಾರಿಗಳನ್ನು ಚುರುಕುಗೊಳಿಸಲು ಸರ್ಕಾರ ಉದ್ದೇಶಿಸಿದ್ದು, ಸದ್ಯದಲ್ಲೇ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಂದ ಕಾಮಗಾರಿ ಪರಿಶೀಲನೆ ನಡೆಯಲಿದೆ ಎಂದು ಜಲಮಂಡಳಿಯ ಅಧ್ಯಕ್ಷ ರಾಮ್‌ಪ್ರಸಾತ್ ಮನೋಹರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಪ ಮುಖ್ಯಮಂತ್ರಿ ನಿರ್ದೇಶನದಂತೆ ಕಾವೇರಿ ಐದನೇ ಹಂತದ ಕಾಮಗಾರಿಯ ಅಂತಿಮ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. ಪರಿಶೀಲನೆಯ ನಂತರ ಲೋಕಾರ್ಪಣೆಯ ಬಗ್ಗೆ ನಿರ್ಧರಿಸಲಾಗುವುದು ಎಂದರು. ಕಳೆದ ವಾರ ಒಂದು ದಿನದ ಮಟ್ಟಿಗೆ ಬೇರೆ ಹಂತಗಳಲ್ಲಿ ನೀರು ಪೂರೈಕೆ ನಿಲ್ಲಸಲಾಗಿತ್ತು. ಇದರಿಂದ ಕೆಲವೆಡೆ ಏರ್‌ಲಾಕ್ ಆದ ಪರಿಣಾಮವಾಗಿ ನೀರು ಪೂರೈಕೆಯಲ್ಲಿ ವ್ಯತ್ಯವಾಗಿದೆ. ಇನ್ನೆರಡು ದಿನಗಳಲ್ಲಿ ಇದು ಸರಿಯಾಗಲಿದೆ ಎಂದು ರಾಮ್‌ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

**<><*<><>*><>**

ಚಿಕ್ಕಬಳ್ಳಾಪುರ ನಗರದಲ್ಲಿ ಬಾಕಿ ಇರುವ ಯುಜಿಡಿ ಕಾಮಗಾರಿ ಪೂರ್ಣಗೊಳಿಸಲು ೭೪ ಕೋಟಿ ರೂಪಾಯಿ ಅನುದಾನದ ಅಗತ್ಯವಿದ್ದು, ಸರ್ಕಾರ ೩೦ ಕೋಟಿ ರೂಪಾಯಿ ಬಿಡುಗಡೆ ಮಾಡಿದೆ. ಬಾಕಿ ೪೪ ಕೋಟಿ ರೂಪಾಯಿ ಅನುದಾನ ಬಿಡುಗಡೆಗೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ಶಾಸಕ ಪ್ರದೀಶ್ ಈಶ್ವರ್ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೬.೩೫ ಕ್ಕೆ <>*><>**